# Akashvani : Bangalore
# Regional Bulletin In Kannada
# 08.02.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ತೊಗರಿ ಬೆಳೆಗಾರರಿಗೆ ಸಿಹಿ ಸುದ್ದಿ ; ಕೇಂದ್ರದ ಬೆಂಬಲ ಬೆಲೆ ಜೊತೆಗೆ ೪೫೦ ರೂಪಾಯಿ ಪ್ರೋತ್ಸಾಹ ಧನ ನೀಡಲು ರಾಜ್ಯ ಸರ್ಕಾರ ನಿರ್ಧಾರ**

**೨. ಬೆಂಗಳೂರಿನಲ್ಲಿ ಮೆಟ್ರೋದರ ಏರಿಸಿ ಬಿಎಂಆರ್‌ಸಿಎಲ್ ಆದೇಶ ; ನಾಳೆಯಿಂದಲೇ ಪರಿಷ್ಕೃತ ದರ ಜಾರಿ**

**೩. ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಜೊತೆ ಭಾರತೀಯ ನೌಕಾಪಡೆ ೬೧೦ ಕೋಟಿ ರೂಪಾಯಿ ಮೌಲ್ಯದ ಒಪ್ಪಂದಕ್ಕೆ ಸಹಿ**

**೪. ಏರೋ ಇಂಡಿಯಾ - ೨೦೨೫ಕ್ಕೆ ರಾಜಧಾನಿ ಬೆಂಗಳೂರು ಸಜ್ಜು ; ಯಲಹಂಕ ವಲಯದಲ್ಲಿ ಡ್ರೋನ್‌ಗಳ ಹಾರಾಟ ನಿಷೇಧ**

**೫. ಆಗ್ರಾದಲ್ಲಿ ವಿಮಾನ ತರಬೇತಿ ವೇಳೆ ಶಿವಮೊಗ್ಗ ಮೂಲದ ವಾಯುಪಡೆ ಅಧಿಕಾರಿ ಹುತಾತ್ಮ**

**<><*<><>*><>**

ತೊಗರಿ ಬೆಳೆಗಾರರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದೆ. ಕೇಂದ್ರ ಸರ್ಕಾರದ ನಿಗದಿತ ಬೆಂಬಲ ಬೆಲೆ ಜೊತೆಗೆ ೪೫೦ ರೂಪಾಯಿಗಳ ಸಹಾಯ ಧನ ನೀಡಲು ನಿರ್ಧರಿಸಿದೆ. ಇದಕ್ಕೆ ಆರ್ಥಿಕ ಇಲಾಖೆಯ ಅನುಮೋದನೆಯೂ ದೊರೆತಿದೆ. ಇಂದು ಆಡಳಿತ ಇಲಾಖೆಯ ಪ್ರಸ್ತಾವನೆಯನ್ನು ಪರಿಶೀಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸರ್ಕಾರದ ಬೆಂಬಲ ಯೋಜನೆಯಡಿ ತೊಗರಿ ಉತ್ಪನ್ನಕ್ಕೆ ಪ್ರತಿ ಕ್ವಿಂಟಾಲ್‌ಗೆ ೭ ಸಾವಿರದ ೫೫೦ ರೂಪಾಯಿಗಳ ಜೊತೆಗೆ ೪೫೦ ರೂಪಾಯಿಗಳ ಪ್ರೋತ್ಸಾಹ ಧನ ನೀಡಲು ಸಮ್ಮತಿ ನೀಡಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ದರ ಏರಿಕೆ ಮಾಡಿ ಬಿಎಮ್‌ಆರ್‌ಸಿಎಲ್ ಆದೇಶ ಹೊರಡಿಸಿದೆ. ಪರಿಷ್ಕರಣೆ ಸಮಿತಿಯ ಶಿಫಾರಸ್ಸಿನಂತೆ ನಾಳೆಯಿಂದ ಪರಿಷ್ಕೃತ ದರ ಜಾರಿಗೆ ಬರಲಿದೆ. ೨ ಕಿಲೋಮೀಟರ್‌ರವರೆಗೆ ೧೦ ರೂಪಾಯಿ, ೨ ರಿಂದ ೪ ರವರೆಗೆ ೨೦ ರೂಪಾಯಿ, ೪ ರಿಂದ ೬ ರವರೆಗೆ ೩೦ ರೂಪಾಯಿ, ೬ ರಿಂದ ೮ ಕಿಲೋಮೀಟರ್ ೪೦ ರೂಪಾಯಿ, ೮ ರಿಂದ ೧೦

ಕಿಲೋಮೀಟರ್‌ರವರೆಗೆ ೫೦ ರೂಪಾಯಿ ಹಾಗೂ ೧೦ ರಿಂದ ೧೫ ಕಿಲೋಮೀಟರ್ ೬೦ ರೂಪಾಯಿ, ೧೫ ರಿಂದ ೨೦ ಕಿಲೋಮೀಟರ್ ೭೦ ರೂಪಾಯಿ, ೨೦ ರಿಂದ ೨೫ ಕಿಲೋಮೀಟರ್ ೮೦ ರೂಪಾಯಿ, ೨೫ ರಿಂದ ೩೦ ಕಿಲೋಮೀಟರ್ ೯೦ ರೂಪಾಯಿ ಹಾಗೂ ೩೦ ಕಿಲೋಮೀಟರ್‌ಗೂ ಅಧಿಕ ಪ್ರಯಾಣಕ್ಕೆ ೯೦ ರೂಪಾಯಿ ನಿಗದಿಪಡಿಸಲಾಗಿದೆ. ಸ್ಮಾರ್ಟ್ ಕಾರ್ಡ್‌ಗಳ ಮೇಲೆ ಶೇಕಡ ೫ ರಷ್ಟು ರಿಯಾಯಿತಿ ಮುಂದುವರೆದಿದ್ದು, ಸ್ಮಾರ್ಟ್ ಕಾರ್ಡ್‌ನಲ್ಲಿ ಇನ್ನುಮುಂದೆ ಕನಿಷ್ಠ ಮೊತ್ತ ೯೦ ರೂಪಾಯಿ ಹೊಂದಿರುವುದು ಕಡ್ಡಾಯವಾಗಿದೆ. ರಜೆ ದಿನಗಳಲ್ಲಿ ಸ್ಮಾರ್ಟ್ ಕಾರ್ಡ್‌ಗಳ ಮೇಲೆ ಶೇಕಡ ೧೦ ರಷ್ಟು ರಿಯಾಯಿತಿ ಸಿಗಲಿದೆ. ಕಳೆದ ೮ ವರ್ಷದಿಂದ ಮೆಟ್ರೋ ಪ್ರಯಾಣ ದರ ಏರಿಕೆಯಾಗಿರಲಿಲ್ಲ. ದರ ಪರಿಷ್ಕರಣೆ ಸಂಬಂಧ ರಚಿಸಿದ ಸಮಿತಿ ಸಿಂಗಾಪುರ್, ಹಾಂಕಾಂಗ್ ದೆಹಲಿಗೆ ತೆರಳಿ ಅಧ್ಯಯನ ನಡೆಸಿ ದರ ಪರಿಷ್ಕರಣೆ ಸಿದ್ಧಪಡಿಸಿದೆ.

**<><*<><>*><>**

ಭಾರತದ ನವರತ್ನ ಹಾಗೂ ಸಾರ್ವಜನಿಕ ವಲಯದ ರಕ್ಷಣಾ ಉದ್ಯಮವಾದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಹಾಗೂ ಭಾರತೀಯ ನೌಕಾಪಡೆ ಇಂದು ೬೧೦ ಕೋಟಿ ಮೌಲ್ಯದ ಒಪ್ಪಂದಕ್ಕೆ ಸಹಿ ಹಾಕಿದೆ. ಒಪ್ಪಂದದಂತೆ ಬಿಇಎಲ್ ನೌಕಾಪಡೆಗೆ ಎಲೆಕ್ಟ್ರೋ ಆಪ್ಟಿಕ್ ಫೈಯರ್ ಕಂಟ್ರೋಲ್ ಸಿಸ್ಟಮ್ ಪೂರೈಕೆ ಮಾಡಲಿದೆ. ಸಂಪೂರ್ಣವಾಗಿ ಸ್ವದೇಶಿ ನಿರ್ಮಿತ ಈ ತಂತ್ರಜ್ಞಾನವು ಸಮುದ್ರದಲ್ಲಿ ಹಗಲು, ರಾತ್ರಿ ವೇಳೆಯಲ್ಲಿ ಕಾರ್ಯ ನಿರ್ವಹಿಸಲಿದೆ. ಇದರೊಂದಿಗೆ ಹೆಚ್ಚುವರಿಯಾಗಿ ಬಿಇಎಲ್ ೩೫೨ ಕೋಟಿ ಮೌಲ್ಯದ ಇತರ ತಂತ್ರಜ್ಞಾನದ ಪೂರೈಕೆಗೆ ಸಮ್ಮತಿಸಿದೆ. ಇದರಲ್ಲಿ ಡ್ರೋನ್ ವಿರೋಧಿ ವ್ಯವಸ್ಥೆ ಸಂಯೋಜಿತ ಅಗ್ನಿಶಾಮಕ ಪತ್ತೆ ಮತ್ತು ಹಡಗು ಸಂವಹನ ವ್ಯವಸ್ಥೆ, ಬಿಡಿಭಾಗಗಳು, ಸೇವೆಗಳು ಇತ್ಯಾದಿ ಸೇರಿದೆ. ಈ ಮೂಲಕ ಪ್ರಸಕ್ತ ಹಣಕಾಸು ವರ್ಷದಲ್ಲಿ ಬಿಇಎಲ್ ಒಟ್ಟು ೧೧ ಸಾವಿರದ ೮ ನೂರ ೫೫ ಕೋಟಿ ರೂಪಾಯಿ ಮೌಲ್ಯದ ತಂತ್ರಜ್ಞಾನ ಪೂರೈಸಲು ಒಪ್ಪಿಕೊಂಡಿದೆ.

**<><*<><>*><>**

ಭಾರತದ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಏರೋಸ್ಪೇಸ್ ಮತ್ತು ರಕ್ಷಣಾ ಇಲಾಖೆಯ ಸಹಯೋಗದಲ್ಲಿ ಪ್ರತಿಷ್ಠಿತ ಏರೋಇಂಡಿಯಾ - ೨೦೨೫. ಇದೇ ೧೦ ರಿಂದ ೧೪ರವರೆಗೆ ನಡೆಯಲಿದೆ. ರಕ್ಷಣಾ ಸಚಿವಾಲಯದೊಂದಿಗೆ ಹಿಂದೂಸ್ತಾನ್ ಏರೊನಾಟಿಕ್ ಲಿಮಿಟೆಡ್ ಮತ್ತು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಹಾಗೂ ಬಾಹ್ಯಾಕಾಶ ಇಲಾಖೆ ಸಹಯೋಗದೊಂದಿಗೆ ಏರ್‌ಶೋ ಆಯೋಜಿಸಿದೆ. ರಕ್ಷಣಾ ಹೂಡಿಕೆದಾರರು, ಭಾರತೀಯ ರಕ್ಷಣಾ ಕೈಗಾರಿಕೆಗಳು, ನವೋದ್ಯಮಗಳು, ವಿದೇಶಿ ಹೂಡಿಕೆದಾರರು, ಮಿಲಿಟರಿ ಪೂರೈಕೆದಾರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈಗಾಗಲೇ ರಾಜಧಾನಿ ಬೆಂಗಳೂರಿನಲ್ಲಿ ಮುನ್ನೆಚ್ಚರಿಕಾ

ಕ್ರಮವಾಗಿ ಬಿಗಿಭದ್ರತೆ ಏರ್ಪಡಿಸಲಾಗಿದೆ. ಈ ಪ್ರದೇಶದಲ್ಲಿ ಡ್ರೋನ್‌ಗಳ ಹಾರಾಟವನ್ನು ನಿಷೇಧಿಸಲಾಗಿದೆ.

**<><*<><>*><>**

ಇದೇ ೧೧ ರಿಂದ ೧೪ರವರೆಗೆ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದ ಸಿದ್ಧತೆಗಳನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಇಂದು ವೀಕ್ಷಿಸಿದರು.  ಬೆಂಗಳೂರಿನ ಅರಮನೆ ಮೈದಾನಕ್ಕೆ ಭೇಟಿ ನೀಡಿದ ಅವರು, ಸಮಾವೇಶದಲ್ಲಿ ಪ್ರತಿಯೊಂದು ಸೌಕರ್ಯವೂ ಪರಿಪೂರ್ಣವಾಗಿರಬೇಕು. ಆದರಾತಿಥ್ಯಗಳಲ್ಲಿ ಸಣ್ಣ ಲೋಪವೂ ಆಗಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ಸಮಾವೇಶದ ಮೂಲಕ ರಾಜ್ಯದ ವರ್ಚಸ್ಸು ಹೆಚ್ಚಾಗಬೇಕು ಎಂದು ತಿಳಿಸಿದ ಅವರು, ವಿವಿಧ ಇಲಾಖೆಗಳ ನಡುವೆ ಒಳ್ಳೆಯ ಸಮನ್ವಯತೆ ಇರಬೇಕು ಎಂದು ನಿರ್ದೇಶನ ನೀಡಿದ್ದಾರೆ. ಪ್ರಮುಖ ಕಾರ್ಯಕ್ರಮ ನಡೆಯುವ ಪ್ರಧಾನ ವೇದಿಕೆ ಹಾಗೂ ವಿವಿಧ ವಸ್ತು ಪ್ರದರ್ಶನ ಪ್ರದೇಶಕ್ಕೂ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಿದ್ದಾರೆ.

**<><*<><>*><>**

ರೈಲ್ವೆ ಇಲಾಖೆ ೫೦ ವರ್ಷಗಳಲ್ಲಿ ಸಾಧಿಸದ ಪ್ರಗತಿಯನ್ನು ಕಳೆದ ೧೦ ವರ್ಷಗಳಲ್ಲಿ ಸಾಧಿಸಿದೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ೧೦ ವರ್ಷಗಳಲ್ಲಿ ಎನ್‌ಡಿಎ ಸರ್ಕಾರ ೪೭ ಸಾವಿರ ಕೋಟಿ ವೆಚ್ಚದಲ್ಲಿ ರೈಲ್ವೆ ಮಾರ್ಗಗಳನ್ನು ವಿದ್ಯುದ್ಧೀಕರಣಗೊಳಿಸಿದೆ ಎಂದು ತಿಳಿಸಿದರು. ತುಮಕೂರು- ದಾವಣಗೆರೆ, ತುಮಕೂರು-ರಾಯದುರ್ಗ ರೈಲ್ವೆ ಯೋಜನೆ ಭೂ ಸ್ವಾಧೀನಾ ಪ್ರಕ್ರಿಯೆ ಶೇಕಡ ೯೭ರಷ್ಟು ಪೂರ್ಣಗೊಂಡಿದೆ. ನೆಲಮಂಗಲ-ತುಮಕೂರು, ಕೆ.ಬಿ.ಕ್ರಾಸ್ -ತುರುವೇಕೆರೆ ರಾಷ್ಟ್ರೀಯ ಹೆದ್ದಾರಿ ೬೪೭ ಕೋಟಿ ವೆಚ್ಚದಲ್ಲಿ ಅಗಲೀಕರಣವಾಗಲಿದೆ. ಸಿರಾ-ಬಡವನಹಳ್ಳಿ ರಾಷ್ಟ್ರೀಯ ಹೆದ್ದಾರಿಯನ್ನು ೫೭೦ ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ೨೪ನೇ ವಾರ್ಷಿಕ ಘಟಿಕೋತ್ಸವದ ಭಾಗ ೨ ಇಂದು ವಿಟಿಯುನ ಜ್ಞಾನ ಸಂಗಮ ಆವರಣದ ಡಾ.ಎ.ಪಿಜೆ. ಅಬ್ದುಲ್ ಕಲಾಂ

ಸಭಾಂಗಣದಲ್ಲಿ ನಡೆಯಿತು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಘಟಿಕೋತ್ಸವಕ್ಕೆ ಚಾಲನೆ ನೀಡಿದರು. ಇದೇ ವೇಳೆ ಅವರು, ಸ್ನಾತಕೋತ್ತರ ಪದವಿ ಹಾಗೂ ಪಿಎಚ್.ಡಿ. ಪದವಿ ಮತ್ತು ರ್‍ಯಾಂಕ ವಿಜೇತರಿಗೆ ಚಿನ್ನದ ಪದಕ ಪ್ರದಾನ ಮಾಡಿದರು. ಬಳಿಕ ಮಾತನಾಡಿದ ರಾಜ್ಯಪಾಲರು, ಪಡೆದ ಶಿಕ್ಷಣ ಎಂದೂ ವ್ಯರ್ಥವಾಗುವುದಿಲ್ಲ. ವೈಯಕ್ತಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

**ಧ್ವನಿ : ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್**

ಖ್ಯಾತ ವಿಜ್ಞಾನಿ ಡಾ. ಟೆಸ್ಸಿ ಥಾಮಸ್, ವಿಶ್ವವಿದ್ಯಾಲಯದ ಕುಲಪತಿ ಡಾ. ಎಸ್. ವಿದ್ಯಾಶಂಕರ ಸೆನೆಟ್ ಸಿಂಡಿಕೇಟ್ ಸದಸ್ಯರು, ವಿಶ್ವವಿದ್ಯಾಲಯದ ಪ್ರಾಧ್ಯಾಪಕರೂ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು. ದಾವಣಗೆರಿಯ ವಿಟಿಯು ಕೇಂದ್ರದಲ್ಲಿ ಮಾಸ್ಟರ್ ಆಫ್ ಟೌನ ಇನ್ ಕಂಟ್ರಿ ಪ್ಲ್ಯಾನಿಂಗ್ ಪದವಿಯಲ್ಲಿ ಚಿನ್ನದ ಪದಕ ಪಡೆದ ಅನನ್ಯ, ಆಕಾಶವಾಣಿ ಜೊತೆ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ಅನನ್ಯ**

**<><*<><>*><>**

ರಾಜ್ಯದಲ್ಲಿನ ಪ್ರತಿಯೊಂದು ಗ್ರಾಮ ಪಂಚಾಯತಿ ಮಟ್ಟದಲ್ಲಿ ಸರ್ಕಾರ ಸಹಕಾರ ಸಂಘ ರಚನೆ ಮಾಡುವ ಉದ್ದೇಶ ಹೊಂದಿದೆ ಎಂದು ಸಹಕಾರ ಸಚಿವ ಕೆ.ಎನ್ ರಾಜಣ್ಣ ತಿಳಿಸಿದ್ದಾರೆ. ಕೊಪ್ಪಳದಲ್ಲಿ ಸಹಕಾರ ಜಾಗೃತಿ ಸಮಾವೇಶಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯುವಕರನ್ನು ಸೆಳೆಯಲು ಸಹಕಾರ ಇಲಾಖೆಯ ಪಾಠವನ್ನು ಪಠ್ಯಪುಸ್ತಕದಲ್ಲಿ ಸೇರಿಸಬೇಕು ಎಂದು ಹೇಳಿದ್ದಾರೆ.

**ಧ್ವನಿ : ಸಹಕಾರ ಸಚಿವ ಕೆ.ಎನ್ ರಾಜಣ್ಣ**

**<><*<><>*><>**

ಉತ್ತರಪ್ರದೇಶದ ಆಗ್ರದಲ್ಲಿ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ವಾಯುಪಡೆ ಅಧಿಕಾರಿಯೊಬ್ಬರು ಸ್ಕೈ ಡೈವಿಂಗ್ ವೇಳೆಯಲ್ಲಿ ಪ್ಯಾರಚೂಟ್ ತೆರೆದುಕೊಳ್ಳದ ಹಿನ್ನೆಲೆಯಲ್ಲಿ ಹುತಾತ್ಮರಾಗಿದ್ದಾರೆ. ಹೊಸನಗರ ತಾಲೂಕಿನ ಪಟಗುಪ್ಪ ಬಳಿಯ ಸಂಕೂರು ನಿವಾಸಿ ಮಂಜುನಾಥ್ ಜಿ.ಎಸ್ ಮೃತಪಟ್ಟ ದುರ್ದೈವಿಯಾಗಿದ್ದಾರೆ. ಆಗ್ರಾದ ಪ್ಯಾರಾ ಟ್ರೈನಿಂಗ್ ಸ್ಕೂಲ್ ನಲ್ಲಿ ಕಾರ್ಯ ನಿರ್ವಹಿಸುತಿದ್ದ ಮಂಜುನಾಥ್ ಸ್ಕೈ ಡೈವಿಂಗ್ ಮಾಡುವಾಗ ಪ್ಯಾರಾಚೂಟ್

ತೆರೆದುಕೊಳ್ಳದ ಕಾರಣ ನಿಯಂತ್ರಣ ಕಳೆದುಕೊಂಡು ಸುಮಾರು ೧೩ ಸಾವಿರ ಅಡಿ ಮೇಲಿಂದ ಕೆಳಗೆ ಬಿದ್ದಿದ್ದಾರೆ ಎನ್ನಲಾಗುತ್ತಿದೆ. ಮೃತದೇಹ ಆಗ್ರಾದಲ್ಲಿದ್ದು ಇಂದು ರಾತ್ರಿ ಇಲ್ಲವೇ ನಾಳೆ ಬೆಳಗ್ಗೆ ಹುಟ್ಟೂರು ಹೊಸನಗರ ತಾಲೂಕಿನ ಸಂಕೂರು ಗ್ರಾಮಕ್ಕೆ ಆಗಮಿಸಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**